## ಪಾಲಿಟಿಕಲ್ Quicks

### ಐವರ ಅರ್ಜಿ ವಿಚಾರಣೆಗೂ ಸಮ್ಮತಿ

**ವಿಕ ಸುದ್ದಿಲೋಕ** ಹೊಸದಿಲ್ಲಿ 16/7/19



ರಾಜೀನಾಮೆ ಅಂಗೀಕರಿಸಲು ಸ್ಪೀಕರ್‌ಗೆ ನಿರ್ದೇಶನ ನೀಡುವಂತೆ ಶನಿವಾರ ಐವರು ಶಾಸಕರು ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಮಂಗಳವಾರ ನಡೆಸಲು ಸುಪ್ರೀಂ ಕೋರ್ಟ್ ಒಪ್ಪಿಗೆ ಸೂಚಿಸಿದೆ. ಶಾಸಕರಾದ ಆನಂದ್ ಸಿಂಗ್, ಮುನಿರತ್ನ, ಎಂಬಿಟಿ ನಾಗಾರಾಜ್, ರೋಷನ್ ಬೇಗ್, ಡಾ. ಕೆ. ಸುಧಾಕರ್ ಅವರು ಸ್ಪೀಕರ್ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಶನಿವಾರ ಅರ್ಜಿ ಸಲ್ಲಿಸಿದ್ದರು. ಈ ಮೊದಲು ಸಲ್ಲಿಕೆ ಆಗಿದ್ದ 10 ಶಾಸಕರ ಅರ್ಜಿಯ ವಿಚಾರಣೆ ಜತೆಗೆ ಈ ಐವರು ಶಾಸಕರ ಅರ್ಜಿಯ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸಲಿದೆ. ಶಾಸಕರ ಪರವಾಗಿ ಮುಕುಲ್ ರೋಹಟಗಿ, ಸ್ಪೀಕರ್ ರಮೇಶ್ ಕುಮಾರ್ ಪರವಾಗಿ ಅಭಿಷೇಕ್ ಮನು ಸಿಂಘ್ವಿ ಹಾಗೂ ಸರಕಾರದ ಪರವಾಗಿ ಹಿರಿಯ ವಕೀಲ ರಾಜೀವ್ ಧವನ್ ವಾದ ಮಂಡಿಸಲಿದ್ದಾರೆ.